**ದಿನಾಂಕ 21-05-2022 ರಂದು ಶನಿವಾರ ಬೆಳಗ್ಗೆ 11:00 ಗಂಟೆಗೆ ಅನ್ನಸಂದ್ರ ಪಾಳ್ಯದ, ಬಿ.ಬಿ.ಎಂ.ಪಿ ಯೋಗ ಸೆಂಟರ್‌ನಲ್ಲಿ ವಾರ್ಡ್ ಸಂಖ್ಯೆ:87ರ, ಶ್ರೀ.ವಿಜಯ ಕುಮಾರ್ ಸಹಾಯಕ ಕಾರ್ಯಪಾಲಕ ಅಭಿಯಂತರರು (Nodel Officer) ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು.**

**ಹಾಜರಿದ್ದ ಅಧಿಕಾರಿಗಳು :**

| | |
|---|---|
| 1. | ಶ್ರೀ. ಜಿ.ಡಿ.ಸೋಮಯ್ಯ (ಸಹಾಯಕ ಅಭಿಯಂತರರು) |
| 2. | ಶ್ರೀ. ರಂಗನಾಥ್ (ಕಿರಿಯ ಆರೋಗ್ಯ ಪರಿವೀಕ್ಷಕರು) |
| 3. | ಶ್ರೀ. ಗಿರೀಶ್ ಬಾಬು |
| 4. | ಶ್ರೀ. ಸುಬ್ರಮಣಿ.ಕೆ |
| 5. | ಶ್ರೀ. ತುಲಾಸಿ ರಾಯ್ ಕೆ.ವಿ |
| 6. | ಶ್ರೀ. ಪ್ರವೀಣ್.ಎಸ್ |
| 7. | ಶ್ರೀ. ಮುರುಗನ್ |
| 8. | ಶ್ರೀ. ಸದಾನಂದ್ |
| 9. | ಶ್ರೀ. ಗಂಗಪ್ಪ |
| 10. | ಶ್ರೀ. ರಾಮಯ್ಯ.ಕೆ |
| 11. | ಶ್ರೀ. ಸುಬಾಷ್ ಗೋಪಾಲಯ್ಯ |
| 12. | ಶ್ರೀ.ಕೆ.ಆರ್.ಸಿ. ವಾರಿಯರ್ಸ್ |
| 13. | ನಿವಾಸಿ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಸಾರ್ವಜನಿಕರು |

ಮಾನ್ಯ ಅಧ್ಯಕ್ಷರು ಹಾಜರಿದ್ದ ಅಧಿಕಾರಿಗಳು, ವಾರ್ಡ್ ಸಮಿತಿ ಸದಸ್ಯರು ಹಾಗೂ ರೆಸಿಡೆಂಟ್ಸ್ ವೆಲ್ಫೇರ್ ಆಸೋಸಿಯೆಷನ್‌ನ ಅಧ್ಯಕ್ಷರುಗಳು, ಪ್ರತಿನಿಧಿಗಳು ಹಾಗೂ ಸಾರ್ವಜನಿಕರನ್ನು ಸಭೆಗೆ ಸ್ವಾಗತಿಸುತ್ತಾ ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

ಈ ಹಿಂದೆ ನಡೆದ ಸಭೆಯ ನಡವಳಿಗಳನ್ನು ಓದಿ ರೆಕಾರ್ಡ್ ಮಾಡಲಾಯಿತು.

1) **ಕೋವಿಡ್-19 ಸಾಂಕ್ರಮಿಕ ರೋಗಕ್ಕೆ ಸಂಬಂಧಿಸಿದಂತೆ, ನಾಲ್ಕನೇ ಅಲೆಯನ್ನು ನಿಯಂತ್ರಿಸುವ ಬಗ್ಗೆ ಮತ್ತು ಸೊಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತ ಕ್ರಮಗಳ ಬಗ್ಗೆ.**

ಈ ಕುರಿತು ಚರ್ಚಿಸಲಾಗಿ, ವಾರ್ಡ್‌ನಲ್ಲಿ ಕೋವಿಡ್-19 ನಾಲ್ಕನೇ ಅಲೆಗೆ ಸಂಬಂಧಪಟ್ಟ ಸೋಂಕು ಹರಡುವುದನ್ನು ತಡೆಗಟ್ಟುವ ಎಲ್ಲಾ ಮುಂಜಾಗೃತ ಕ್ರಮಗಳನ್ನು ತೆಗೆದುಕೊಳ್ಳುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

2) **ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಹಾಗೂ ಒಳಚರಂಡಿಗಳಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ:-**

ವಾರ್ಡ್ ವ್ಯಾಪ್ತಿಯ ಯಲ್ಲಮ್ಮ ದೇವಸ್ಥಾನದ ರಸ್ತೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಹಾಗೂ ಅನ್ನಸಂದ್ರಪಾಳ್ಯ ಯೋಗ ಸೆಂಟರ್ ಬಳಿ ಒಳಚರಂಡಿಯ ಸಮಸ್ಯೆ ಇದ್ದು ಸಮಸ್ಯೆಗಳನ್ನು ಬಗೆಹರಿಸುವಂತೆ ಸಾರ್ವಜನಿಕರು ಕೋರಿರುತ್ತಾರೆ,

ಕ್ರಮಕ್ಕಾಗಿ:ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರಿಗೆ.

3) **ಬೀದಿ ದೀಪಗಳ ನಿರ್ವಹಣೆ ಬಗ್ಗೆ:-**

ವಾರ್ಡ್ ವ್ಯಾಪ್ತಿಯಲ್ಲಿ ಬರುವ ವಿನಾಯಕ ನಗರ 1ನೇ ಮುಖ್ಯರಸ್ತೆ ಹಾಗೂ 11ನೇ ಅಡ್ಡರಸ್ತೆಯಲ್ಲಿ ಬೀದಿ ದೀಪಗಳು ಸಮರ್ಪಕವಾಗಿ ಉರಿಯುತ್ತಿಲ್ಲವೆಂದು ಸಾರ್ವಜನಿಕರು ತಿಳಿಸಿದರು, ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ಕ್ರಮ ವಹಿಸಿ ವರದಿ ಮಾಡಲು ಸೂಚಿಸಲಾಯಿತು.

ಕ್ರಮಕ್ಕಾಗಿ:-ವಾರ್ಡ್ ಅಭಿಯಂತರರು.

4) **ವಿದ್ಯುತ್ ಸರಬರಾಹು (ಬೆಸ್ಕಾಂ)ಗೆ ಸಂಬಂದಿಸಿದ ವಿಷಯದ ಬಗ್ಗೆ:-**

ವಾರ್ಡ್ ವ್ಯಾಪ್ತಿಯ ಯಲ್ಲಮ್ಮ ದೇವಸ್ಥಾನ ರಸ್ತೆಯಲ್ಲಿ ವಿದ್ಯುತ್ ತಂತಿಗಳು ಜೋತುಬಿದ್ದಿದು ಇದ್ದನ್ನು ಸರಿಪಡಿಸಲು ಸಾರ್ವಜನಿಕರು ಕೋರಿರುತ್ತಾರೆ,

ಕ್ರಮಕ್ಕಾಗಿ:- ಬೆಸ್ಕಾಂ ಅಭಿಯಂತರರು.

5) **ವಾರ್ಡ್‌ನ ವಿವಿಧ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ:-**

ವಾರ್ಡ್‌ನ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಚರ್ಚಿಸಲಾಗಿದ್ದು ವಿನಾಯಕನಗರ 12ನೇ ಅಡ್ಡರಸ್ತೆ, ಯಲ್ಲಮ್ಮ ದೇವಸ್ಥಾನದ ರಸ್ತೆ ಹಾಗೂ ಜಗದೀಶ್‌ನಗರ 1ನೇ ಮುಖ್ಯರಸ್ತೆಯಲ್ಲಿ ಚರಂಡಿ ಹೂಳು ತೆಗೆಯುವಂತೆ ಸಾರ್ವಜನಿಕರು ಕೋರಿರುತ್ತಾರೆ,

ಕ್ರಮಕ್ಕಾಗಿ:-ವಾರ್ಡ್ ಅಭಿಯಂತರರು.

6) **ಇನ್ನಿತರೆ ವಿಷಯಗಳು ಅಧ್ಯಕ್ಷರ ಸೂಚನೆಯಂತೆ:-**

ಈ ಕುರಿತು ಸಾರ್ವಜನಿಕರು ಮಾತನಾಡಿ ಹೆಚ್.ಎ.ಎಲ್ ಏರ್‌ಪೋರ್ಟ್ ವಾರ್ಡ್ ವ್ಯಾಪ್ತಿಯ ಕೃಷ್ಣ ಅಪಾರ್ಟ್‌ಮೆಂಟ್ ವಸತಿಗಳ ಕಂದಾಯವು ಆನ್‌ಲೈನ್ ಮುಖಾಂತರ ಪಾವತಿಸಲು ಅಗುತ್ತಿರುವುದಿಲ್ಲ, ಕೃಷ್ಣ ಅಪಾರ್ಟ್‌ಮೆಂಟ್ ರಸ್ತೆಯಲ್ಲಿ ಪುಟ್‌ಬಾತ್ ತೆರವುಗೊಳಿಸಲು ಕೋರಿರುತ್ತಾರೆ ಹಾಗೂ ನ್ಯೂ ಡಿ ಎಕ್ಸ್ ಮ್ಯಾಕ್ಸ್ ಹತ್ತಿರ ಹೊಸ ಕಲ್ವರ್ಟ್ ನಿರ್ಮಿಸಬೇಕೆಂದು ಕೋರಿರುತ್ತಾರೆ ಹಾಗೂ ಮನೆ ಮನೆ ಬಾಗಿಲಿಗೆ ಘನತ್ಯಾಜ್ಯ ಸಂಗ್ರಹಣೆಗೆ ಇನ್ನೂ ಹೆಚ್ಚು 5 ಹೊಸ ಆಟೋಗಳು ಬೇಕೆಂದು ಕೋರಿರುತ್ತಾರೆ.

ಕ್ರಮಕ್ಕಾಗಿ:-ವಾರ್ಡ್ ಅಭಿಯಂತರರು.

ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿಗಳು
ವಾರ್ಡ್ ನಂ.87 ಹೆಚ್.ಎ.ಎಲ್ ಏರ್‌ಪೋರ್ಟ್

ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ
ನೋಡಲ್ ಅಧಿಕಾರಿಗಳು

**ಪ್ರತಿಯನ್ನು:**

1. ಮಾನ್ಯ ಜಂಟಿ ಆಯುಕ್ತರು, ಮಹದೇವಪುರ ವಲಯ ರವರ ಮಾಹಿತಿಗಾಗಿ ರವಾನಿಸಿದೆ.
2. ಮುಖ್ಯ ಅಭಿಯಂತರರು, ಮಹದೇವಪುರ ವಲಯ ರವರ ಮಾಹಿತಿಗಾಗಿ ರವಾನಿಸಿದೆ.
3. ಸಹಾಯಕ ಕಾರ್ಯಪಾಲಕ ಅಭಿಯಂಯತರರು, ಘಣ ತಾಜ್ಯ ನಿರ್ವಹಣೆ ಕೆ.ಆರ್.ಪುರಂ ರವರ ಮಾಹಿತಿಗಾಗಿ ಕಳುಹಿಸಿದೆ.
4. ಕಛೇರಿ ಪ್ರತಿ.